## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀಮತಿ ಶಾರದಬಾಯಿ, ಸದಸ್ಯರು, ಕೌಶಿಕ ಗ್ರಾಮ ಪಂಚಾಯತಿ, ಹಾಸನ ತಾಲ್ಲೂಕು, ಹಾಸನ ಜಿಲ್ಲೆ ಇವರು ಸತತವಾಗಿ ನಾಲ್ಕು ಸಾಮಾನ್ಯ ಸಭೆಗಳಿಗೆ ಗೈರು ಹಾಜರಾಗಿರುವ ಬಗ್ಗೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 43-ಎ ರನ್ವಯ ಕ್ರಮ ಜರುಗಿಸುವ ಬಗ್ಗೆ.

ಓದಲಾಗಿದೆ:

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ ಜಿಲ್ಲೆ ರವರ ಪತ್ರ ಸಂಖ್ಯೆ: ಸಂಖ್ಯೆ:ಜಿ.ಪಂ/ಪಶಾ/40/2017-18. ದಿನಾಂಕ:15-11-2017ರ ಮತ್ತು 28-12-2017.
2. ಸರ್ಕಾರದ ಇದೇ ಸಮಸಂಖ್ಯೆಯ ದಿನಾಂಕ:02-01-2018ರ ಕಾರಣ ಕೇಳುವ ನೋಟೀಸು.
3. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಹಾಸನ ರವರ ವರದಿ ನಂ.ತಾ.ಪಂ.ಹಾ/ಸಿ.(8)2017-18 ದಿನಾಂಕ:01-02-2018.
4. ಸರ್ಕಾರದ ಸಮಸಂಖ್ಯೆಯ ವಿಚಾರಣಾ ನೋಟೀಸ್, ದಿನಾಂಕ 30.11.2017.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ ಜಿಲ್ಲೆ ರವರ ಪ್ರಸ್ತಾವನೆಯಲ್ಲಿ ಈ ಕೆಳಕಂಡಂತೆ ತಿಳಿಸಿರುತ್ತಾರೆ.

ಶ್ರೀಮತಿ ಶಾರದಬಾಯಿ, ಹಾಸನ ಜಿಲ್ಲೆ, ಹಾಸನ ತಾಲ್ಲೂಕು, ಕೌಶಿಕ ಗ್ರಾಮ ಪಂಚಾಯತಿಯ ಸದಸ್ಯರು ದಿನಾಂಕ:22.02.2017, 24.05.2017, 17-06-2017 ಮತ್ತು 23.08.2017 ರಂದು ನಡೆದ ಗ್ರಾಮ ಪಂಚಾಯತಿಯ ಸಾಮಾನ್ಯ ಸಭೆಗಳಿಗೆ, ಪಂಚಾಯತಿಯ ಅನುಮತಿ ಇಲ್ಲದೆ ನಿರಂತರವಾಗಿ ನಾಲ್ಕು ಸಾಮಾನ್ಯ ಸಭೆಗಳಿಗೆ ಗೈರು ಹಾಜರಾಗಿದ್ದು, ಈ ಬಗ್ಗೆ ಗ್ರಾಮ ಪಂಚಾಯತಿ ಸಾಮಾನ್ಯ ಸಭೆಯಲ್ಲಿ ಚರ್ಚಿಸಿ, ನೀರ್ಣಯವಾಗಿದ್ದು, ಪ್ರಕರಣ 43(ಎ)(iii) ರನ್ವಯ ಕ್ರಮ ಕೈಗೊಳ್ಳಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ ಜಿಲ್ಲೆ ರವರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಶ್ರೀಮತಿ ಶಾರದಬಾಯಿ, ಸದಸ್ಯರು, ಕೌಶಿಕ ಗ್ರಾಮ ಪಂಚಾಯತಿ, ಹಾಸನ ತಾಲ್ಲೂಕು, ಹಾಸನ ಜಿಲ್ಲೆ ಇವರು ದಿನಾಂಕ: 22.02.2017, 24.05.2017, 17-06-2017 ಮತ್ತು 23.08.2017 ರಂದು ನಡೆದ ಕೌಶಿಕ ಗ್ರಾಮ ಪಂಚಾಯಿತಿಯ ನಾಲ್ಕು ಸಾಮಾನ್ಯ ಸಭೆಗಳಿಗೆ ಪಂಚಾಯಿತಿಯ ಅನುಮತಿ ಇಲ್ಲದೆ ಗೈರು ಹಾಜರಾಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ, ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ಶ್ರೀಮತಿ ಶಾರದಬಾಯಿ, ಸದಸ್ಯರು, ಕೌಶಿಕ ಗ್ರಾಮ ಪಂಚಾಯಿತಿ, ಇವರಿಗೆ ಕಾರಣ ಕೇಳುವ ನೋಟೀಸ್‌ನ್ನು ಜಾರಿಗೊಳಿಸಲಾಗಿದ್ದು, ಸದರಿ ಕಾರಣ ಕೇಳುವ ನೋಟೀಸಿಗೆ ~~ಶ್ರೀ~~ ಶ್ರೀಮತಿ ಶಾರದಬಾಯಿ, ರವರು ತಮ್ಮ ಹೇಳಿಕೆಯನ್ನು ಸಲ್ಲಿಸಿರುವುದಿಲ್ಲ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಶ್ರೀಮತಿ ಶಾರದಬಾಯಿ, ಸದಸ್ಯರು, ಕೌಶಿಕ ಗ್ರಾಮ ಪಂಚಾಯತಿ ಇವರು ಜನವರಿ 2014 ರಿಂದ ಮಾರ್ಚ್ 2017ರ ವರೆಗೆ ಸದರಿಯವರು ತಿಳಿಸಿರುವ ವಿಳಾಸದಲ್ಲಿ ಬಾಡಿಗೆ ಮನೆಯಲ್ಲಿ ವಾಸವಿದ್ದು, ತದನಂತರ ಮನೆ ಖಾಲಿ ಮಾಡಿ ಬೇರೆ ಕಡೆ ಸ್ಥಳಂತರ ಮಾಡಿದ್ದು, ಕೌಶಿಕ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ವಾಸವಿರುವುದಿಲ್ಲವೆಂದು ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕೌಶಿಕ ಗ್ರಾಮ ಪಂಚಾಯತಿ ರವರು ಮಹಜರ್ ಮಾಡಿ ವರದಿ ಸಲ್ಲಿಸಿರುತ್ತಾರೆಂದು ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಹಾಸನ ರವರು ವರದಿಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (4) ರನ್ವಯ ಶ್ರೀಮತಿ ಶಾರದಬಾಯಿ, ಸದಸ್ಯರು, ಕೌಶಿಕ ಗ್ರಾಮ ಪಂಚಾಯತಿ, ಹಾಸನ ತಾಲ್ಲೂಕು, ಹಾಸನ ಜಿಲ್ಲೆ ಇವರನ್ನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ರವರ ನ್ಯಾಯಾಲಯದಲ್ಲಿ ವಿಚಾರಣೆ ಕರೆಯಲಾಗಿ

ದಿನಾಂಕ:09-03-2018 ರಂದು ಜರುಗಿದ ವಿಚಾರಣೆಯಲ್ಲಿ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಹಾಸನ ತಾಲ್ಲೂಕು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕೌಶಿಕ ಗ್ರಾಮ ಪಂಚಾಯತಿ, ಹಾಸನ ತಾಲ್ಲೂಕು ರವರು ಹಾಜರಾಗಿರುತ್ತಾರೆ. ಆಪಾದಿತ ಸದಸ್ಯೆಯರು ಹಾಜರಾಗಿರುವುದಿಲ್ಲ. ಶ್ರೀಮತಿ ಶಾರದಬಾಯಿ ಸದಸ್ಯರು, ಕೌಶಿಕ ಗ್ರಾಮ ಪಂಚಾಯತಿ ಇವರು ಕೌಶಿಕ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ವಾಸವಿರುವುದಿಲ್ಲ ಹಾಗೂ ಅವರ ಬಗ್ಗೆ ಯಾವ ಮಾಹಿತಿಯೂ ಇರುವುದಿಲ್ಲ ಎಂದು ಹೇಳಿಕೆಯನ್ನು ನೀಡಿರುತ್ತಾರೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ ಜಿಲ್ಲೆ ರವರ ಪ್ರಸ್ತಾವನೆ, ಹಾಗೂ ಕಡತದಲ್ಲಿನ ಎಲ್ಲಾ ದಾಖಲೆಗಳನ್ನು ಪರಿಶೀಲಿಸಲಾಗಿ, ಶ್ರೀಮತಿ ಶಾರದಬಾಯಿ ರವರು ನಾಲ್ಕು ಸಾಮಾನ್ಯ ಸಭೆಗಳಿಗಿಂತಲೂ ಹೆಚ್ಚಿನ ಸಾಮಾನ್ಯ ಸಭೆಗಳಿಗೆ ಸತತವಾಗಿ ಗೈರುಹಾಜರಾಗಿರುವುದು ಸ್ಪಷ್ಟವಾಗಿದ್ದು, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 43(ಎ) ರನ್ವಯ ಶ್ರೀಮತಿ ಶಾರದಬಾಯಿ, ಸದಸ್ಯರು, ಕೌಶಿಕ ಗ್ರಾಮ ಪಂಚಾಯಿತಿ, ಹಾಸನ ತಾಲ್ಲೂಕು, ಹಾಸನ ಜಿಲ್ಲೆ ಇವರನ್ನು ಗ್ರಾಮ ಪಂಚಾಯಿತಿ ಸದಸ್ಯತ್ವ ಸ್ಥಾನದಿಂದ ತೆಗೆದುಹಾಕಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1340 ಗ್ರಾಪಂಅ 2017 ಬೆಂಗಳೂರು, ದಿನಾಂಕ:03-04-2018.**

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಶ್ರೀಮತಿ ಶಾರದಬಾಯಿ, ಸದಸ್ಯರು, ಕೌಶಿಕ ಗ್ರಾಮ ಪಂಚಾಯಿತಿ, ಹಾಸನ ತಾಲ್ಲೂಕು, ಹಾಸನ ಜಿಲ್ಲೆ ಇವರು ಗ್ರಾಮ ಪಂಚಾಯಿತಿಯ 4 ಸಾಮಾನ್ಯ ಸಭೆಗಳಿಗೆ ಸತತವಾಗಿ ಗೈರುಹಾಜರಾಗಿರುವುದು ಸ್ಪಷ್ಟವಾಗಿದ್ದು, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರನ್ವಯ ಶ್ರೀಮತಿ ಶಾರದಬಾಯಿ, ಸದಸ್ಯರು, ಕೌಶಿಕ ಗ್ರಾಮ ಪಂಚಾಯಿತಿ, ಹಾಸನ ತಾಲ್ಲೂಕು, ಹಾಸನ ಜಿಲ್ಲೆ ಇವರನ್ನು ಹಾಸನ ಜಿಲ್ಲೆ, ಹಾಸನ ತಾಲ್ಲೂಕಿನ ಕೌಶಿಕ ಗ್ರಾಮ ಪಂಚಾಯತಿಯ ಸದಸ್ಯತ್ವ ಸ್ಥಾನದಿಂದ ತಕ್ಷಣದಿಂದ ಜಾರಿಗೆ ಬರುವಂತೆ ತೆಗೆದು ಹಾಕಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

4/4/18

**(ಮುಬಾರಕ್ ಅಹ್ಮದ್),**
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ:**

1. ಜಿಲ್ಲಾಧಿಕಾರಿಗಳು, ಹಾಸನ ಜಿಲ್ಲೆ, ಹಾಸನ.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಹಾಸನ ಜಿಲ್ಲೆ.
3. ಕಾರ್ಯನಿರ್ವಾಹಕಾಧಿಕಾರಿ, ತಾಲ್ಲೂಕು ಪಂಚಾಯಿತಿ, ಹಾಸನ ತಾಲ್ಲೂಕು, ಹಾಸನ ಜಿಲ್ಲೆ.
4. ಶ್ರೀಮತಿ ಶಾರದಬಾಯಿ, ಸದಸ್ಯರು, ಕೌಶಿಕ ಗ್ರಾಮ ಪಂಚಾಯಿತಿ, ಹಾಸನ ತಾಲ್ಲೂಕು, ಹಾಸನ ಜಿಲ್ಲೆ.
5. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕೌಶಿಕ ಗ್ರಾಮ ಪಂಚಾಯಿತಿ, ಹಾಸನ ತಾಲ್ಲೂಕು, ಹಾಸನ ಜಿಲ್ಲೆ.
6. ಗಣಕ ಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.